726 (984) ಶ್ರೀ ಅಂಜನಾಮೂರ್ತಿ (ನೆಲಮಂಗಲ): ಮಾನ್ಯ ಉಪ ಮುಖ್ಯ ಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಸಣ್ಣ ಕೆರೆಗಳಿವೆ ;

ಆ) ಅವುಗಳಲ್ಲಿ ಎಷ್ಟು ಎಕರೆಗಳ ಭೂಮಿಯನ್ನು ಒತ್ತುವರಿ ಮಾಡಲಾಗಿದೆ ;

ಇ) ಒತ್ತುವರಿ ಮಾಡಿರುವವರ ಮೇಲೆ ಸರ್ಕಾರ ಕಾನೂನಿನ ಕ್ರಮ ಕೈಗೊಂಡಿರುವ ಪ್ರಕರಣಗಳು ಯಾವುವು ; (ಪ್ರಕರಣವಾರು ವಿವರ ನೀಡುವುದು) ;

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯ ಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು):

ಅ) ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 3391 ಕೆರೆಗಳಿವೆ.

ಆ) ಸರ್ವೆ ಕಾರ್ಯದಿಂದ ಒತ್ತುವರಿಯನ್ನು ಗುರುತಿಸಬೇಕಾಗಿದ್ದು, ಸಿಬ್ಬಂದಿ ಕೊರತೆಯಿಂದಾಗಿ ಹಂತ ಹಂತವಾಗಿ ಈ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ. ಈಗಾಗಲೇ ಕೈಗೊಂಡಿರುವ ಸರ್ವೆ ಕಾರ್ಯದಂತೆ 426 ಕೆರೆಗಳಲ್ಲಿ ಒಟ್ಟಾರೆ 3475.31 ಎಕರೆ ವಿಸ್ತೀರ್ಣ ಒತ್ತುವರಿಗೆ ಒಳಪಟ್ಟಿದೆ. ಇದಲ್ಲದೆ, ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಜಲ ಸಂವರ್ಧನೆ ಯೋಜನಾ ಸಂಘದ ವತಿಯಿಂದ ಅಭಿವೃದ್ಧಿ ಕಾರ್ಯ ಕೈಗೊಳ್ಳುತ್ತಿರುವ ಸಣ್ಣ ನೀರಾವರಿ ಹಾಗೂ ಜಿಲ್ಲಾ ಪಂಚಾಯತ್‌ನ ಒಟ್ಟು 2015 ಕೆರೆಗಳಲ್ಲಿ 1253 ಕೆರೆಗಳ ಸರ್ವೆ ಕಾರ್ಯ ಮಾಡಿದ್ದು, ಈ ಕೆರೆಗಳಲ್ಲಿ ಒಟ್ಟಾರೆ 2470 ಎಕರೆ ಜಮೀನು ಒತ್ತುವರಿಯಾಗಿರುತ್ತದೆ.

ಇ) ಯಾವುದೇ ಕಾನೂನಿನ ಕ್ರಮ ಕೈಗೊಂಡಿಲ್ಲ. ಹೀಗಿದ್ದೂ, ಮೇಲೆ ತಿಳಿಸಿದ ಒತ್ತುವರಿಯಲ್ಲಿ 3388.39 ಎಕರೆ ಒತ್ತುವರಿಯನ್ನು ತೆರವುಗೊಳಿಸಲಾಗಿದೆ.

727 (985) ಶ್ರೀ ಅಂಜನಾಮೂರ್ತಿ (ನೆಲಮಂಗಲ): ಮಾನ್ಯ ಉಪಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 2006–07ನೇ ಸಾಲಿನಲ್ಲಿ ಎಷ್ಟು ನೀರಾವರಿ ಯೋಜನೆಗಳನ್ನು ಸರ್ಕಾರ ಪೂರ್ಣಗೊಳಿಸಲಾಗಿದೆ ;

ಆ) ಇದಕ್ಕಾಗಿ ಎಷ್ಟು ಹಣವನ್ನು ಒದಗಿಸಲಾಗಿದೆ ಮತ್ತು ಖರ್ಚು ಮಾಡಲಾಗಿದೆ ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು):

ಅ) 2006–07ನೇ ಸಾಲಿನಲ್ಲಿ ಒಟ್ಟು 165 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ.

ಆ) ಸಣ್ಣ ನೀರಾವರಿ ಇಲಾಖೆಗೆ 2006–07ನೇ ಸಾಲಿಗಾಗಿ ಯೋಜನೆ ಲೆಕ್ಕ ಶೀರ್ಷಿಕೆ ಅಡಿ ರೂ. 57818.33 ಲಕ್ಷಗಳ ಅನುದಾನ ಒದಗಿಸಲಾಗಿದ್ದು,

ಪೂರ್ಣಗೊಂಡಿರುವ 165 ಯೋಜನೆಗಳು ಸೇರಿದಂತೆ ಈವರೆಗೆ ರೂ. 14,485.37 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

728 (986) ಶ್ರೀ ಅಂಜನಾಮೂರ್ತಿ (ನೆಲಮಂಗಲ): ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ನೆಲಮಂಗಲ ಮತ ಕ್ಷೇತ್ರದಲ್ಲಿ ಸಣ್ಣ ನೀರಾವರಿ ಕೆರೆಗಳನ್ನು ಪುನಶ್ಚೇತನಗೊಳಿಸಲು ಸರ್ಕಾರ ಬಿಡುಗಡೆ ಮಾಡಿದ ಹಣ ಎಷ್ಟು ;

ಆ) ಪ್ರಸ್ತುತ ಖರ್ಚಾಗಿ ಉಳಿದ ಹಣವೆಷ್ಟು ;

ಇ) ಈ ಮತ ಕ್ಷೇತ್ರದಲ್ಲಿ ಕೆರೆ ಕಾಮಗಾರಿಗಳು ಕಳಪೆ ಮಟ್ಟದ್ದಾಗಿದೆಯೆಂದು ಸರ್ಕಾರಕ್ಕೆ ಪತ್ರ ಮುಖೇನ ಮನವಿ ಮಾಡಿರುವುದು ನಿಜವಲ್ಲವೆ ;

ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು):

ಅ) ನೆಲಮಂಗಲ ಮತ ಕ್ಷೇತ್ರದ 12 ಕೆರೆಗಳ ಅಭಿವೃದ್ಧಿಗಾಗಿ ರೂ. 234.41 ಲಕ್ಷಗಳ ಅಂದಾಜು ಮೊತ್ತ ನಿಗದಿಪಡಿಸಲಾಗಿದೆ.

ಆ) ಡಿಸೆಂಬರ್ 2006ರ ಅಂತ್ಯದವರೆಗೆ ರೂ. 80.21 ಲಕ್ಷಗಳು ವೆಚ್ಚವಾಗಿದೆ.

ಇ) ನಿಜ.

ಈ) ಈ ಬಗ್ಗೆ ಮುಖ್ಯ ಇಂಜಿನಿಯರ್‌ರವರಿಗೆ ತನಿಖೆ ನಡೆಸಿ ಕಾಮಗಾರಿಗಳ ಸ್ಥಳ ಪರಿವೀಕ್ಷಣೆ ಮಾಡಿ ವರದಿ ಸಲ್ಲಿಸುವಂತೆ ಸೂಚಿಸಿದ್ದು, ಮುಖ್ಯ ಇಂಜಿನಿಯರ್‌ರವರು ಸಲ್ಲಿಸುವ ವರದಿಯ ಆಧಾರದ ಮೇಲೆ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

729 (987) ಶ್ರೀ ಅಂಜನಾಮೂರ್ತಿ (ನೆಲಮಂಗಲ): ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಣ್ಣ ನೀರಾವರಿ ಮೂಲಗಳು ಎಷ್ಟು ; ಯಾವುವು ;

ಆ) ಈ ಮೂಲಗಳನ್ನು ಪುನಶ್ಚೇತನಗೊಳಿಸಲು ಸರ್ಕಾರ ಬಿಡುಗಡೆ ಮಾಡಿದ ಹಣ ಎಷ್ಟು ;

ಇ) ಇದಕ್ಕಾಗಿ ಖರ್ಚಾಗಿರುವ ಮತ್ತು ಉಳಿಕೆಯಾಗಿರುವ ಹಣ ಎಷ್ಟು ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು):

ಅ) ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ 3391 ಕೆರೆಗಳು, 402 ಏತ ನೀರಾವರಿ ಯೋಜನೆಗಳು, 698 ಅಣೆಕಟ್ಟು/ಪಿಕಪ್ ಬಾಂದಾರಗಳು ಹಾಗೂ 6 ಮಧ್ಯಮ ನೀರಾವರಿ ಯೋಜನೆಗಳು.